# All India Radio: Bangalore
## National Bulletin In Kannada
**05.01.2026  07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.01.2026  07.35 a.m.**

**<><><><>**

ಮುಖ್ಯಾಂಶಗಳು

1. ಗೋವಾದಲ್ಲಿಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದ ಸಮುದ್ರ ಪ್ರತಾಪ್ ಹಡಗು ಲೋಕಾರ್ಪಣೆ
2. ಫ್ರಾನ್ಸ್, ಲೆಕ್ಸೆಂಬರ್ಗ್‌ಗೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅಧಿಕೃತ ಭೇಟಿ
3. ದೇಶದಲ್ಲಿ ಕಳೆದ ವರ್ಷ ೧೫೦ ದಶಲಕ್ಷ ಟನ್ ಅಕ್ಕಿ ಉತ್ಪಾದನೆ
4. ಡಿಯುವಿನ ಘೋಘ್ಲಾ ಬೀಚ್‌ನಲ್ಲಿ ಇಂದಿನಿಂದ ಖೇಲೋ ಇಂಡಿಯಾ ಬೀಚ್ ಕ್ರೀಡಾಕೂಟ

<><><><>

ಭಾರತೀಯ ಕರಾವಳಿ ರಕ್ಷಣಾ ಪಡೆಯ ಮೊದಲ ದೇಶೀಯವಾಗಿ ವಿನ್ಯಾಸಗೊಳಿಸಿ, ನಿರ್ಮಿಸಲಾದ ಮಾಲಿನ್ಯ ನಿಯಂತ್ರಣ ಹಡಗು 'ಸಮುದ್ರ ಪ್ರತಾಪ್' ಅನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಗೋವಾದಲ್ಲಿ ಲೋಕಾರ್ಪಣೆ ಮಾಡಲಿದ್ದಾರೆ. ೧೧೪.೫ ಮೀಟರ್ ಉದ್ದದ ನೌಕೆಯನ್ನು ಶೇಕಡಾ ೬೦ ಕ್ಕಿಂತ ಹೆಚ್ಚು ದೇಶೀಯ ವಸ್ತುಗಳಿಂದ ನಿರ್ಮಿಸಲಾಗಿದೆ. ೪ ಸಾವಿರದ ೨೦೦ ಟನ್ ತೂಕದ ಈ ಹಡಗು, ೨೨ ನಾಟ್ಸ್‌ಗಳಿಗಿಂತ ಹೆಚ್ಚು ವೇಗ ಮತ್ತು ೬ ಸಾವಿರ ನಾಟಿಕಲ್ ಮೈಲುಗಳ ಕ್ಷಮತೆಯನ್ನು ಹೊಂದಿದೆ. ಈ ಹಡಗು ಸಮುದ್ರದ ಮಾಲಿನ್ಯ ನಿಯಂತ್ರಣ, ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳು ಮತ್ತು ಭಾರತದ ವಿಶೇಷ ಆರ್ಥಿಕ ವಲಯವನ್ನು ರಕ್ಷಿಸಲು ನಿರ್ಣಾಯಕ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಈ ಹಡಗನ್ನು ಡಿಸೆಂಬರ್‌ನಲ್ಲಿ ಗೋವಾ ಶಿಪ್‌ಯಾರ್ಡ್ ಲಿಮಿಟೆಡ್‌ನಲ್ಲಿ ಕರಾವಳಿ ರಕ್ಷಣಾ ಪಡೆಗೆ ಔಪಚಾರಿಕವಾಗಿ ತಲುಪಿಸಲಾಯಿತು. 'ಸಮುದ್ರ ಪ್ರತಾಪ್' ಸೇರ್ಪಡೆಯೊಂದಿಗೆ, ಭಾರತೀಯ ಕರಾವಳಿ ರಕ್ಷಣಾ ಪಡೆ ತನ್ನ ಕಾರ್ಯಾಚರಣೆಯ ಸಿದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ಕಡಲ ಸುರಕ್ಷತೆ, ಪರಿಸರ ಸಂರಕ್ಷಣೆ ಮತ್ತು ಸ್ಥಳೀಯ ರಕ್ಷಣಾ ಉತ್ಪಾದನೆಗೆ ಭಾರತದ ಬದ್ಧತೆಯನ್ನು ಬಲಪಡಿಸುತ್ತದೆ.

<><><><>

ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ನಿನ್ನೆ ರಾತ್ರಿ ಫ್ರಾನ್ಸ್ ಮತ್ತು ಲಕ್ಸೆಂಬರ್ಗ್‌ಗೆ ಅಧಿಕೃತ ಭೇಟಿ ನೀಡಿದ್ದಾರೆ. ತಮ್ಮ ಭೇಟಿಯ ಸಮಯದಲ್ಲಿ ಡಾ. ಜೈಶಂಕರ್, ಪ್ಯಾರಿಸ್‌ನಲ್ಲಿ ಫ್ರಾನ್ಸ್ ನಾಯಕರನ್ನು ಭೇಟಿ ಮಾಡಲಿದ್ದಾರೆ ಮತ್ತು ಫ್ರಾನ್ಸ್ ವಿದೇಶಾಂಗ ಸಚಿವ ಜೀನ್ ನೋಯೆಲ್ ಬ್ಯಾರಟ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಭಾರತ-ಫ್ರಾನ್ಸ್ ಕಾರ್ಯತಂತ್ರದ ಪಾಲುದಾರಿಕೆಯ ಅಡಿಯಲ್ಲಿ ಸಾಧಿಸಿದ ಪ್ರಗತಿ ಮತ್ತು ಜಾಗತಿಕ ಪ್ರಾಮುಖ್ಯತೆಯ ವಿಷಯಗಳ ಕುರಿತು ಅವರು ಚರ್ಚಿಸಲಿದ್ದಾರೆ. ಡಾ. ಜೈಶಂಕರ್ ಅವರು ೩೧ ನೇ ಆವೃತ್ತಿಯ ಫ್ರಾನ್ಸ್ ರಾಯಭಾರಿಗಳ ಸಮ್ಮೇಳನದಲ್ಲಿ ಗೌರವಾನ್ವಿತ ಅತಿಥಿಯಾಗಿ ಮಾತನಾಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ತಮ್ಮ ಭೇಟಿಯ ಎರಡನೇ ಚರಣದಲ್ಲಿ ವಿದೇಶಾಂಗ ಸಚಿವರು, ಲಕ್ಸೆಂಬರ್ಗ್‌ಗೆ ಭೇಟಿ ನೀಡಲಿದ್ದಾರೆ. ಅಲ್ಲಿ ಅವರು ಲಕ್ಸೆಂಬರ್ಗ್ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ಕ್ಸೇವಿಯರ್ ಬೆಟ್ಟೆಲ್ ಮತ್ತು ಲಕ್ಸೆಂಬರ್ಗ್ ಹಿರಿಯ ನಾಯಕರೊಂದಿಗೆ ಚರ್ಚೆ ನಡೆಸಲಿದ್ದಾರೆ. ಅಲ್ಲದೇ ಡಾ. ಜೈಶಂಕರ್ ಅವರು ಲಕ್ಸೆಂಬರ್ಗ್‌ನಲ್ಲಿರುವ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಹ ಸಂವಾದ ನಡೆಸಲಿದ್ದಾರೆ.

<><><><>

೨೦೨೫ ರಲ್ಲಿ ಭಾರತದ ಅಕ್ಕಿ ಉತ್ಪಾದನೆಯು ೧೫೦ ದಶಲಕ್ಷ ಟನ್‌ಗಳನ್ನು ಮೀರಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಭಾರತೀಯ ಕೃಷಿ ಸಂಶೋಧನಾ ಮಂಡಳಿ ಅಭಿವೃದ್ಧಿಪಡಿಸಿದ ಸುಧಾರಿತ ೨೫ ಬೆಳೆಗಳ ೧೮೪ ಹೊಸ ತಳಿಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಭಾರತ ಅಕ್ಕಿ ಉತ್ಪಾದನೆಯಲ್ಲಿ ಚೀನಾವನ್ನು ಮೀರಿಸಿದೆ ಎಂದರು. ಭಾರತ ಜಗತ್ತಿಗೆ ಅಕ್ಕಿ ರಫ್ತು ಮಾಡುವ ಪ್ರಮುಖ ರಾಷ್ಟ್ರವಾಗಿದೆ. ಕಳೆದ ೧೦ ವರ್ಷಗಳಲ್ಲಿ ೩ ಸಾವಿರದ ೨೦೦ಕ್ಕೂ ಹೆಚ್ಚು ಹೊಸ ತಳಿಗಳ ಬೀಜಗಳನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಅವರು ತಿಳಿಸಿದರು.

ಮೂರು ವರ್ಷಗಳಲ್ಲಿ ದೇಶಾದ್ಯಂತ ವಿವಿಧ ಯೋಜನೆಗಳು ರೈತರನ್ನು ತಲುಪುವಂತೆ ಮಾಡಲು ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

<><><><>

ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಖಾತೆ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಇಂದಿನಿಂದ ಎರಡು ದಿನಗಳ ಕಾಲ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ. ಇಂದು ಮಧ್ಯಾಹ್ನ ಅವರು ಹೊಸಪೇಟೆ ಸಮೀಪದ, ಯುನೆಸ್ಕೊ ವಿಶ್ವ ಪಾರಂಪರಿಕ ತಾಣ ಹಂಪಿಗೆ ಭೇಟಿ ನೀಡಿ, ವಿವಿಧ ಐತಿಹಾಸಿಕ ಸ್ಥಳಗಳನ್ನು ವೀಕ್ಷಿಸಲಿದ್ದಾರೆ. ಸಂಜೆ ಹಂಪಿಯ ಶ್ರೀ ವಿರೂಪಾಕ್ಷೇಶ್ವರ ದೇವರ ದರ್ಶನ ಪಡೆಯಲಿದ್ದಾರೆ.

<><><><>

ವೈಮಾನಿಕ ಅಭಿವೃದ್ಧಿ ಸಂಸ್ಥೆ ಆಯೋಜಿಸಿರುವ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ 'ಏರೋನಾಟಿಕ್ಸ್ ೨೦೪೭' ಬೆಂಗಳೂರಿನ ಸೆಂಟರ್ ಫಾರ್ ಏರ್‌ಬೋರ್ನ್ ಸಿಸ್ಟಮ್ಸ್‌ನಲ್ಲಿ ನಡೆಯುತ್ತಿದೆ . ಈ ವಿಚಾರ ಸಂಕಿರಣವನ್ನು ನಿನ್ನೆ ಭಾರತೀಯ ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಲಘು ಯುದ್ಧ ವಿಮಾನ ತೇಜಸ್ ಹಾರಾಟದ ೨೫ ವರ್ಷಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ವೈಮಾನಿಕ ಅಭಿವೃದ್ಧಿ ಸಂಸ್ಥೆಯನ್ನು ಅಭಿನಂದಿಸಿದರು. ನಿರಂತರವಾಗಿ ವಿಕಸನಗೊಳ್ಳುತ್ತಿರುವ ಇಂದಿನ ಕಾಲಘಟ್ಟದಲ್ಲಿ ಭಾರತೀಯ ವಾಯುಪಡೆಯನ್ನು ಯಾವುದೇ ಸಂದರ್ಭದಲ್ಲಿ ಕಾರ್ಯಾಚರಣೆಗೆ ಸಿದ್ಧವಾಗುವಂತೆ ರೂಪಿಸಬೇಕಿದೆ ಎಂದು ಅವರು ಹೇಳಿದರು. ಎರಡನೇ ದಿನವಾದ ಇಂದು ವಾಯುಯಾನ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿವಿಧ ವಿಚಾರಗೋಷ್ಠಿಗಳು ಮತ್ತು ಸಂವಾದಗಳು ಜರುಗಲಿವೆ.

<><><><>

ದೇಶದ ವಿವಿಧ ಭಾಗಗಳಲ್ಲಿ ದಟ್ಟವಾದ ಮಂಜು ಕವಿದಿದ್ದು, ಗೋಚರತೆ ಕಡಿಮೆ ಇರುವುದರಿಂದ ಹಲವಾರು ರೈಲುಗಳ ಸಂಚಾರಕ್ಕೆ ಅಡ್ಡಿಯಾಗಿದೆ. ಭಾರತೀಯ ರೈಲ್ವೆಯ ಪ್ರಕಾರ, ಸುಮಾರು ೧೧ ರೈಲುಗಳು ಎರಡು ಗಂಟೆಗಳಿಗೂ ಹೆಚ್ಚು ವಿಳಂಬವಾಗಿವೆ. ಪ್ರಯಾಣಿಕರು ರೈಲುಗಳನ್ನು ಹತ್ತಲು ನಿಲ್ದಾಣಕ್ಕೆ ಬರುವ ಮೊದಲು ಅವುಗಳ ಆಗಮನ-ನಿರ್ಗಮನದ ಬಗ್ಗೆ ಪರಿಶೀಲಿಸಲು ಸೂಚಿಸಲಾಗಿದೆ.

<><><><>

ಭಾರತದ ಸಾಂಪ್ರದಾಯಿಕ ಔಷಧ ವ್ಯವಸ್ಥೆ - ಆಯುಷ್ - ಓಮನ್ ಮತ್ತು ನ್ಯೂಜಿಲೆಂಡ್ ಜೊತೆಗಿನ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಗಳಲ್ಲಿ ಔಪಚಾರಿಕ ಮನ್ನಣೆಯನ್ನು ಪಡೆದಿದೆ ಎಂದು ಕೇಂದ್ರ ವಾಣಿಜ್ಯ ಸಚಿವಾಲಯ ತಿಳಿಸಿದೆ.

೨೦೨೫ ರ ಡಿಸೆಂಬರ್‌ನಲ್ಲಿ ಅಂತಿಮಗೊಳಿಸಲಾದ ಎರಡೂ ಒಪ್ಪಂದಗಳು, ಆರೋಗ್ಯ ಸಂಬಂಧಿತ ಸೇವೆಗಳು ಮತ್ತು ಸಾಂಪ್ರದಾಯಿಕ ಔಷಧದ ಕುರಿತು ಮೀಸಲಾದ ಒಪ್ಪಂದಗಳಾಗಿವೆ. ಆಯುಷ್ ಮತ್ತು ಗಿಡಮೂಲಿಕೆ ಉತ್ಪನ್ನಗಳ ರಫ್ತು ಶೇಕಡ ೬.೧೧ ರಷ್ಟು ಬೆಳವಣಿಗೆಯನ್ನು ದಾಖಲಿಸಿದ್ದು, ೨೦೨೩-೨೪ ರಲ್ಲಿ ೬೪೯.೨ ದಶಲಕ್ಷ ಅಮೆರಿಕನ್ ಡಾಲರ್‌ಗಳಿಂದ ೨೦೨೪-೨೫ ರಲ್ಲಿ ೬೮೮.೮೯ ದಶಲಕ್ಷ ಅಮೆರಿಕನ್ ಡಾಲರ್‌ಗಳಿಗೆ ಹೆಚ್ಚಾಗಿದೆ.

<><><><>

ಎರಡನೇ ಖೇಲೋ ಇಂಡಿಯಾ ಬೀಚ್ ಕ್ರೀಡಾಕೂಟ ಇಂದು ಡಿಯುವಿನ ಘೋಘ್ಲಾ ಬೀಚ್‌ನಲ್ಲಿ ಆರಂಭವಾಗಲಿದೆ.

ಕೇಂದ್ರಾಡಳಿತ ಪ್ರದೇಶವಾದ ದಾದ್ರಾ ಮತ್ತು ನಗರ ಹವೇಲಿ ಮತ್ತು ದಮನ್ ಮತ್ತು ಡಿಯು ಆಯೋಜಿಸುತ್ತಿರುವ ಬೀಚ್ ಕ್ರೀಡಾಕೂಟದ ಎಂಟು ವಿಭಿನ್ನ ಕ್ರೀಡೆಗಳಲ್ಲಿ ಎರಡು ಸಾವಿರದ ೧೦೦ ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ. ಈ ಕ್ರೀಡಾಕೂಟಗಳು ಇಂದಿನಿಂದ ೧೦ ರವರೆಗೆ ಭಾರತೀಯ ಕ್ರೀಡಾ ಪ್ರಾಧಿಕಾರ ಮತ್ತು ರಾಷ್ಟ್ರೀಯ ಕ್ರೀಡಾ ಒಕ್ಕೂಟಗಳ ತಾಂತ್ರಿಕ ಮೇಲ್ವಿಚಾರಣೆಯಲ್ಲಿ ನಡೆಯಲಿವೆ. ಬೀಚ್ ಸಾಕರ್, ಬೀಚ್ ವಾಲಿಬಾಲ್, ಬೀಚ್ ಸೆಪಕ್ ಟಕ್ರಾ, ಬೀಚ್ ಕಬಡ್ಡಿ, ಪೆನ್ಕಾಕ್ ಸಿಲಾಟ್ ಮತ್ತು ಓಪನ್ ವಾಟರ್ ಈಜು ಇವು ಆರು ಪದಕ ಕ್ರೀಡಾ ಸ್ಪರ್ಧೆಗಳಾಗಿವೆ. ಮಲ್ಲಕಂಬ ಮತ್ತು ಟಗ್ ಆಫ್ ವಾರ್ ಪದಕೇತರ ಕ್ರೀಡಾ ಸ್ಪರ್ಧೆಗಳಾಗಿವೆ. ಖೇಲೋ ಇಂಡಿಯಾ ಬೀಚ್ ಕ್ರೀಡಾಕೂಟವು ದೇಶದ ಯುವಕರು ಆರೋಗ್ಯಕರ ನಾಗರಿಕರಾಗಲು ಕ್ರೀಡಾ ಸಂಸ್ಕೃತಿಯನ್ನು ಸೃಷ್ಟಿಸುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಅನುಗುಣವಾಗಿದೆ ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ.

<><><><>

೨೦೧೮ ರ ಏಷ್ಯನ್ ಕ್ರೀಡಾಕೂಟದ ಚಿನ್ನದ ಪದಕ ವಿಜೇತ ಎಸ್‌ಎಸ್‌ಸಿಬಿಯ ಅಮಿತ್ ಪಂಗಲ್ ಮತ್ತು ಹರಿಯಾಣದ ಸಾಗರ್ ಗ್ರೇಟರ್ ನೋಯ್ಡಾದ ಗೌತಮ್ ಬುದ್ಧ ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿರುವ ಎಲೈಟ್ ಪುರುಷ ಮತ್ತು ಮಹಿಳಾ ರಾಷ್ಟ್ರೀಯ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಗೆಲುವು ಸಾಧಿಸುವ ಮೂಲಕ ಮುಂದಿನ ಹಂತಕ್ಕೆ ಮುನ್ನಡೆದಿದ್ದಾರೆ.

<><><><>

ನವದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹೊರ ರೋಗಿಗಳು ಸೇವೆಗಳನ್ನು ಪಡೆಯಲು 'ಆಶ್ರಯ' ಸೌಲಭ್ಯವನ್ನು ಜಾರಿಗೊಳಿಸಿದೆ. ಕೇಂದ್ರ ಮೀಸಲು ಪೊಲೀಸ್ ಪಡೆಯ ಬೆಂಬಲದೊಂದಿಗೆ ಪ್ರಾರಂಭಿಸಲಾದ ಈ ಉಪಕ್ರಮವು, ರಾತ್ರಿ ವೇಳೆ ಆಸ್ಪತ್ರೆಯ ಹೊರಗೆ ಕಾಯುತ್ತಿರುವ ರೋಗಿಗಳನ್ನು 'ಆಶ್ರಯ್' ಸೌಲಭ್ಯಕ್ಕೆ ಕಳುಹಿಸಲಾಗುತ್ತದೆ. ಅಲ್ಲದೇ ಒಪಿಡಿ ನೋಂದಣಿ ಸಮಯದಲ್ಲಿ ಮರುದಿನ ಅದೇ ಅನುಕ್ರಮವನ್ನು ನಿರ್ವಹಿಸಲಾಗಿದೆ ಎಂದು ಖಚಿತಪಡಿಸಿಕೊಳ್ಳಲು ಪ್ರತಿ ರೋಗಿಗೆ ಟೋಕನ್ ಸಂಖ್ಯೆಯನ್ನು ನೀಡಲಾಗುತ್ತದೆ. ಈ ಸೌಲಭ್ಯವು ಸುಮಾರು ೨೫೦ ಜನರ ಸಾಮರ್ಥ್ಯವನ್ನು ಹೊಂದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>